Akashvani : Bangalore
National Bulletin In Kannada
01.03.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*****

ಮುಖ್ಯಾಂಶಗಳು :

1. ನವದೆಹಲಿಯಲ್ಲಿಂದು ಕೃಷಿ ಮತ್ತು ಗ್ರಾಮೀಣ ಸಮೃದ್ಧಿ ಕುರಿತಾದ ವೆಬಿನಾರ್‌ನ್ನುದ್ದೇಶಿಸಿ ಪ್ರಧಾನಿ ಭಾಷಣ
2. ದೇಶದ ಸಂಸ್ಕೃತಿ ಮತ್ತು ನಾಗರಿಕತೆ ಅದರ ಸಂಗೀತ ಮತ್ತು ಹಾಡುಗಳ ಮೂಲಕ ಶ್ರೀಮಂತವಾಗುತ್ತದೆ - ಪ್ರಧಾನಿ ನರೇಂದ್ರ ಮೋದಿ
3. ದುಬೈ ಚಾಂಪಿಯನ್‌ಶಿಪ್ ಟೆನಿಸ್ ಟೂರ್ನಿ; ಭಾರತದ ಯುಕಿ ಭಾಂಬ್ರಿ - ಆಸ್ಟ್ರೇಲಿಯಾದ ಎಲೆಕ್ಸಿ ಪಾಪಿರಿನ್ ಜೋಡಿ ಫೈನಲ್‌ಗೆ ಲಗ್ಗೆ
4. ಐಸಿಸಿ ಚಾಂಪಿಯನ್ಸ್ ಟ್ರೋಫಿ; ಅಫ್ಘಾನಿಸ್ತಾನ ವಿರುದ್ಧದ ಪಂದ್ಯ ಮಳೆಯಿಂದ ರದ್ದಾದ ಬೆನ್ನಲ್ಲೇ ಸೆಮಿಫೈನಲ್ ಪ್ರವೇಶಿಸಿದ ಆಸ್ಟ್ರೇಲಿಯಾ

*******

ಪ್ರಧಾನಿ ನರೇಂದ್ರ ಮೋದಿ ಅವರಿಂದು ನವದೆಹಲಿಯಲ್ಲಿ ವರ್ಚುವಲ್ ಮೂಲಕ ಕೃಷಿ ಮತ್ತು ಗ್ರಾಮೀಣ ಸಮೃದ್ಧಿ ಕುರಿತಾದ ವೆಬಿನಾರ್‌ನ್ನುದ್ದೇಶಿಸಿ ಮಾತನಾಡಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಎಲ್ಲಾ ಕೇಂದ್ರ ಸಚಿವರು ಭಾಗವಹಿಸುವ ನಿರೀಕ್ಷೆ ಇದೆ. ೨೦೨೫ರ ಆಯವ್ಯಯದಲ್ಲಿ ಮಾಡಲಾದ ಘೋಷಣೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೇಂದ್ರೀಕೃತ ಚರ್ಚೆ ಮತ್ತು ಕಾರ್ಯತಂತ್ರ ರೂಪಿಸುವಲ್ಲಿ ಪಾಲುದಾರರನ್ನು ತೊಡಗಿಸಿಕೊಳ್ಳುವುದು ಈ ವೆಬಿನಾರ್‌ನ ಗುರಿಯಾಗಿದೆ. ಈ ಕಾರ್ಯಕ್ರಮ ಸಹಯೋಗದ ವಿಧಾನವನ್ನು ಅನುಸರಿಸಿ ಆಯವ್ಯಯದಲ್ಲಿ ವಿವರಿಸಿರುವ ದೃಷ್ಟಿಕೋನವನ್ನು ಸಾಕಾರಗೊಳಿಸಲು ಕೃಷಿ ಬೆಳವಣಿಗೆ ಮತ್ತು ಗ್ರಾಮೀಣ ಸಮೃದ್ಧಿಯ ಮೇಲೆ ಕೇಂದ್ರೀಕರಿಸಿದೆ. ಇದೇ ವೇಳೆ ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಮ್ಮ ಅಭಿಪ್ರಾಯಗಳನ್ನು ಮಂಡಿಸಲಿದ್ದಾರೆ.

*******

ಸೂಫಿ ಸಂಪ್ರದಾಯ ಭಾರತದಲ್ಲಿ ವಿಶೇಷವಾಗಿ ಗುರುತಿಸಿಕೊಂಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ಜಹಾನ್-ಎ-ಖುಸ್ರೌ ಸೂಫಿ ಸಂಗೀತೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಯಾವುದೇ ದೇಶದ ಸಂಸ್ಕೃತಿ ಮತ್ತು ನಾಗರಿಕತೆ ಅದರ ಸಂಗೀತ ಮತ್ತು ಹಾಡುಗಳ ಮೂಲಕ ಶ್ರೀಮಂತವಾಗುತ್ತದೆ. ಜಹಾನ್-ಎ-ಖುಸ್ರೌದಂತಹ ಕಾರ್ಯಕ್ರಮಗಳು ದೇಶದ ಸಂಸ್ಕೃತಿ ಹಾಗೂ ಕಲೆಗೆ ಸಂಬಂಧಿಸಿದಂತೆ ಪ್ರಮುಖವಾಗಿದ್ದು, ಜನರ ಮನಸ್ಸುಗಳನ್ನು ತಲುಪಿದೆ ಎಂದರು.

***ಧ್ವನಿ***ಪ್ರಧಾನಿ

ಇದೇ ವೇಳೆ ಪ್ರಧಾನಿ ಅವರು, ರಂಜಾನ್ ಆರಂಭವಾಗುತ್ತಿರುವ ಸಂದರ್ಭದಲ್ಲಿ ದೇಶದ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ. ಪ್ರಸಕ್ತ ವರ್ಷ ಈ ಭವ್ಯ ಸೂಫಿ ಸಂಗೀತ ಉತ್ಸವದ ೨೫ ನೇ ವಾರ್ಷಿಕೋತ್ಸವವೂ ಆಗಿದ್ದು, ದೇಶ-ವಿದೇಶಗಳ ಕಲಾವಿದರು, ಅಮೀರ್ ಖುಸ್ರೌ ಅವರ ಪರಂಪರೆಯನ್ನು ಆಚರಿಸುವ ಒಂದು ವೇದಿಕೆಯಾಗಿದೆ. ರೂಮಿ ಫೌಂಡೇಶನ್ ಆಯೋಜಿಸಿರುವ ಈ ಉತ್ಸವ ನಾಳೆ ವರೆಗೆ ನಡೆಯಲಿದೆ. ಈ ಕಾರ್ಯಕ್ರಮವನ್ನು ೨೦೦೧ ರಲ್ಲಿ ಪ್ರಸಿದ್ಧ ಚಲನಚಿತ್ರ ನಿರ್ಮಾಪಕ ಮತ್ತು ಕಲಾವಿದ ಮುಜಾಫರ್ ಅಲಿ ಪ್ರಾರಂಭಿಸಿದರು. ಕಾರ್ಯಕ್ರಮದ ಸಂದರ್ಭದಲ್ಲಿ ಪ್ರಧಾನಿ, ತೇಹ್ ಬಜಾರ್ ಗೆ ಭೇಟಿ ನೀಡಲಿದ್ದಾರೆ, ಇದು, ಒಂದು ಜಿಲ್ಲೆ-ಒಂದು ಉತ್ಪನ್ನ ಕರಕುಶಲ ವಸ್ತುಗಳು ಮತ್ತು ದೇಶಾದ್ಯಂತದ ವಿವಿಧ ಕಲಾಕೃತಿಗಳ ಪ್ರದರ್ಶನದ ಜೊತೆಗೆ ಕರಕುಶಲ ವಸ್ತುಗಳು ಮತ್ತು ಕೈಮಗ್ಗಗಳ ಕುರಿತ ಕಿರುಚಿತ್ರ ಪ್ರದರ್ಶನಗಳನ್ನು ಒಳಗೊಂಡಿರುತ್ತದೆ.

*******

ಮುಂಬರುವ ಮಾರುಕಟ್ಟೆ ಋತುವಿನಲ್ಲಿ ಹೆಚ್ಚಿನ ಗೋಧಿ ಹಾಗೂ ಭತ್ತದ ಖರೀದಿಗಾಗಿ ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಸರ್ಕಾರ ಸೂಚಿಸಿದೆ. ಆಹಾರ ಮತ್ತು ಗ್ರಾಹಕ ವ್ಯವಹಾರಗಳು ಹಾಗೂ ಸಾರ್ವಜನಿಕ ವಿತರಣಾ ಸಚಿವಾಲಯದ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ವಿವಿಧ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಆಹಾರ ಕಾರ್ಯದರ್ಶಿಗಳೊಂದಿಗೆ ನಡೆದ ಸಭೆಯಲ್ಲಿ ಈ ಕುರಿತಂತೆ ಚರ್ಚಿಸಲಾಯಿತು. ಹವಾಮಾನ ಮುನ್ಸೂಚನೆ, ಉತ್ಪಾದನೆ ಮತ್ತು ಖರೀದಿಗಾಗಿ ರಾಜ್ಯಗಳ ಸನ್ನದ್ಧತೆ ಕುರಿತಂತೆ ಸಭೆಯಲ್ಲಿ ಚರ್ಚಿಸಲಾಯಿತು. ಮುಂಬರುವ ಹಿಂಗಾರು ಮಾರುಕಟ್ಟೆ ಋತುವಿನಲ್ಲಿ ३೧೦ ಲಕ್ಷ ಮೆಟ್ರಿಕ್ ಟನ್ ಗೋಧಿ ಸಂಗ್ರಹಣೆ ಅಂದಾಜಿಸಲಾಗಿದೆ. ಹಾಗೆಯೇ

೨೦೨೪-೨೫ರ ಮುಂಗಾರು ಮಾರುಕಟ್ಟೆ ಋತುವಿನಲ್ಲಿ ಭತ್ತದ ಸಂಗ್ರಹಣೆಯನ್ನು ಅಂದಾಜು ೭೦ ಲಕ್ಷ ಮೆಟ್ರಿಕ್ ಟನ್‌ಗಳಿಗೆ ನಿಗದಿಪಡಿಸಲಾಗಿದೆ.

*******

ನವದೆಹಲಿಯಲ್ಲಿ ನಿನ್ನೆ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್, ಆಯುಕ್ತ ಆಂಡ್ರಿಯಸ್ ಕುಬಿಲಿಯಸ್ ನೇತೃತ್ವದ ಉನ್ನತಮಟ್ಟದ ಐರೋಪ್ಯ ಒಕ್ಕೂಟದ ನಿಯೋಗ ಹಾಗೂ ಬಾಹ್ಯಾಕಾಶ ವಲಯದ ತಜ್ಞರೊಂದಿಗೆ ಸಮಾಲೋಚನೆ ನಡೆಸಿದರು. ಈ ವೇಳೆ, ಬಾಹ್ಯಾಕಾಶ ಅನ್ವೇಷಣೆಯಲ್ಲಿ ಭಾರತ ಹಾಗೂ ಯೂರೋಪ್ ನಡುವಿನ ಪ್ರಸ್ತುತ ಹಾಗೂ ಭವಿಷ್ಯದ ಸಹಕಾರ ಕುರಿತು ಚರ್ಚೆ ನಡೆಸಲಾಯಿತು. ಈ ವೇಳೆ ಮಾತನಾಡಿದ ಡಾ. ಜಿತೇಂದ್ರ ಸಿಂಗ್, ಭಾರತ ಹಾಗೂ ಐರೋಪ್ಯ ಒಕ್ಕೂಟ ಬಾಹ್ಯಾಕಾಶ ಸಹಕಾರ ಐತಿಹಾಸಿಕವಾಗಿದ್ದು, ಮತ್ತಷ್ಟು ಬಲಗೊಳ್ಳುತ್ತಾ ಸಾಗಿದೆ. ಕಳೆದ ದಶಕದಲ್ಲಿ ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಸಾಧಿಸಿರುವ ಪ್ರಗತಿ ಜಾಗತಿಕ ಮಾನದಂಡವಾಗಿದೆ. ಇಂದು ಭಾರತ ಉಪಗ್ರಹಗಳ ನಿರ್ಮಾಣ, ಉಡಾವಣೆ ಮತ್ತು ನಿರ್ವಹಣೆಯಲ್ಲಿ ಸ್ವತಂತ್ರವಾಗಿ ಕಾರ್ಯ ನಿರ್ವಹಿಸುವ ಸಾಮರ್ಥ್ಯ ಪಡೆದುಕೊಂಡಿದೆ ಎಂದರು.

*******

ಉಪರಾಷ್ಟ್ರಪತಿ ಜಗದೀಪ್ ಧನಕರ್ ಇಂದು ಮಹಾರಾಷ್ಟ್ರ ಪ್ರವಾಸ ಕೈಗೊಳ್ಳಲಿದ್ದು, ಮುಂಬೈಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು, ಮುಂಬೈನಲ್ಲಿರುವ ಕೆಪಿಬಿ ಹಿಂದುಜ ವಾಣಿಜ್ಯ ಕಾಲೇಜಿನ ವಾರ್ಷಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ.

*******

ಅಮೆರಿಕದ ವಾಷಿಂಗ್ಟನ್‌ನಲ್ಲಿರುವ ಶ್ವೇತಭವನದಲ್ಲಿ ನಿನ್ನೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್ಸ್ಕಿ ಅವರ ನಡುವೆ ನಡೆದ ಚರ್ಚೆಯಲ್ಲಿ ಮಾತಿನ ಚಕಮಕಿ ನಡೆದಿದ್ದು, ಅಪರೂಪದ ಭೂಮಿ ಖನಿಜಗಳು ಮತ್ತು ಭದ್ರತಾ ಖಾತ್ರಿಗಳ ಕುರಿತು ಒಪ್ಪಂದಕ್ಕೆ ಸಹಿ ಹಾಕಲು ಅಮೆರಿಕ-ಉಕ್ರೇನ್ ವಿಫಲವಾಗಿವೆ. ಅಂತಾರಾಷ್ಟ್ರೀಯ ಮಾಧ್ಯಮದ ಎದುರು ನಡೆದ ಮಾತುಕತೆಯಲ್ಲಿ ಅಧ್ಯಕ್ಷ ಟ್ರಂಪ್, ಅಧ್ಯಕ್ಷ ಝುಲೆನ್ಸ್ಕಿಯ ಕ್ರಮಗಳು ಮೂರನೇ ಮಹಾಯುದ್ಧಕ್ಕೆ ಕಾರಣವಾಗಬಹುದು. ರಷ್ಯಾದೊಂದಿಗಿನ ಯುದ್ಧದಲ್ಲಿ ಉಕ್ರೇನ್‌ಗೆ, ಅಮೆರಿಕ ನೀಡುತ್ತಿರುವ ಬೆಂಬಲದ ಕುರಿತು ಅವರು ಕೃತಜ್ಞತಾಭಾವ ಹೊಂದಿಲ್ಲ ಎಂದಿದ್ದಾರೆ. ಇದಕ್ಕೆ ಉತ್ತರಿಸಿದ ಅಧಕ್ಷ

ಝೆಲೆನ್ಸ್ಕಿ, ಯುದ್ಧ ಪರಿಹಾರದ ಮಾತುಕತೆಯಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ತಿಳಿಸಿದ್ದಾರೆ.

*******

ಉತ್ತರಾಖಂಡದ ಚಮೋಲಿ ಜಿಲ್ಲೆಯ ಮಾನಾ ಗ್ರಾಮದಲ್ಲಿ ನಿನ್ನೆ ಸಂಭವಿಸಿದ ಹಿಮಪಾತದಲ್ಲಿ ಸಿಲುಕಿದ್ದ ೩೨ ಕಾರ್ಮಿಕರನ್ನು ರಕ್ಷಿಸಲಾಗಿದೆ. ಈ ಕುರಿತು ಮಾಹಿತಿ ನೀಡಿರುವ ಗಡಿ ರಸ್ತೆಗಳ ಸಂಸ್ಥೆ - ಬಿಆರ್‌ಒದ ಕಮಾಂಡರ್ ಅಂಕುರ್ ಮಹಾಜನ್, ಭಾರತೀಯ ಸೇನೆ, ಬಿಆರ್‌ಒ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆಗಳ ತಂಡಗಳು ಕಾರ್ಯಾಚರಣೆಯಲ್ಲಿ ತೊಡಗಿವೆ ಎಂದಿದ್ದಾರೆ. ಈ ಕುರಿತಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗು ರಕ್ಷಣಾ ಸಚಿವ ರಾಜನಾಥ್ ಸಿಂಗ್, ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರೊಂದಿಗೆ ಮಾತುಕತೆ ನಡೆಸಿದ್ದು, ಸಾಧ್ಯವಾದ ಎಲ್ಲಾ ನೆರವು ನೀಡುವ ಭರವಸೆ ನೀಡಿದ್ದಾರೆ.

*******

ನವದೆಹಲಿಯ ಭಾರತ ಮಂಟಪಂನಲ್ಲಿ ನಡೆಯಲಿರುವ ಎನ್‌ಎಕ್ಸ್‌ಟಿ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದಾರೆ. ಈ ವೇಳೆ ನ್ಯೂಸ್ ಎಕ್ಸ್ ವರ್ಲ್ಡ್ ಎಂಬ ವಾಹಿನಿ ಅನಾವರಣಗೊಳ್ಳಲಿದೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ, ಈ ಸಮಾವೇಶಕ್ಕಾಗಿ ವಿವಿಧ ಕ್ಷೇತ್ರಗಳ ಜನರನ್ನು ಒಟ್ಟುಗೂಡಿಸಿದ್ದಕ್ಕಾಗಿ ಐಟಿವಿ ನೆಟ್‌ವರ್ಕ್ ಮತ್ತು ಫೌಂಡೇಷನ್ ಅನ್ನು ಶ್ಲಾಘಿಸಿದ್ದಾರೆ. ಈ ಸಮಾವೇಶ ಫಲಪ್ರದ ಚರ್ಚೆಗಳಿಗೆ ಕಾರಣವಾಗಲಿದೆ ಎಂದು ಅವರು ಭರವಸೆ ವ್ಯಕ್ತಪಡಿಸಿದ್ದಾರೆ.

*******

ಯುಎಇನಲ್ಲಿ ನಡೆಯುತ್ತಿರುವ ದುಬೈ ಚಾಂಪಿಯನ್ ಶಿಪ್ ಟೆನಿಸ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಯುಕಿ ಭಾಂಬ್ರಿ ಮತ್ತು ಆಸ್ಟ್ರೇಲಿಯಾದ ಎಲೆಕ್ಸಿ ಪಾಪಿರಿನ್ ಜೋಡಿ ಫೈನಲ್‌ಗೆ ಲಗ್ಗೆ ಇಟ್ಟಿದೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಭಾರತ-ಆಸ್ಟ್ರೇಲಿಯಾ ಜೋಡಿ, ಬ್ರಿಟನ್‌ನ ಜೆಮಿ ಮುರ್ರೆ ಹಾಗೂ ಆಸ್ಟ್ರೇಲಿಯಾದ ಜಾನ್ ಪಿಯರ್ಸ್ ಜೋಡಿಯನ್ನು ೬-೨, ೪-೬, ೧೦-೭ ಸೆಟ್‌ಗಳ ಅಂತರದಲ್ಲಿ ಮಣಿಸಿತು. ಇದು ಭಾಂಬ್ರಿಯವರ ಎಟಿಪಿ ೫೦೦ರ ಮೊದಲ ಫೈನಲ್ ಪಂದ್ಯವಾಗಿದೆ. ಇಂದು ಸಂಜೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಭಾಂಬ್ರಿ - ಪಾಪಿರಿನ್ ಜೋಡಿ,

ಬ್ರಿಟನ್‌ನ ಹೆನ್ರಿ ಪ್ಯಾಟನ್ ಮತ್ತು ಫಿನ್‌ಲ್ಯಾಂಡ್‌ನ ಹ್ಯಾರಿ ಹೆಲಿಯೋವಾರ ಅವರನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೬ ಗಂಟೆಗೆ ಆರಂಭವಾಗಲಿದೆ.

*******

ಪಾಕಿಸ್ತಾನದ ಲಾಹೋರ್‌ನಲ್ಲಿ ನಿನ್ನೆ ನಡೆದ ಆಸ್ಟ್ರೇಲಿಯಾ ಮತ್ತು ಅಫ್ಘಾನಿಸ್ತಾನ ನಡುವಿನ ಐಸಿಸಿ ಚಾಂಪಿಯನ್ಸ್ ಟ್ರೋಫಿ ಏಕದಿನ ಕ್ರಿಕೆಟ್ ಪಂದ್ಯಾವಳಿಯ ಬಿ ಗುಂಪಿನ ಪಂದ್ಯ ಮಳೆಯಿಂದ ರದ್ದಾದ ಹಿನ್ನೆಲೆ ಆಸ್ಟ್ರೇಲಿಯಾ ಸೆಮಿಫೈನಲ್‌ಗೆ ಪ್ರವೇಶಿಸಿದೆ. ಮೊದಲಿಗೆ ಟಾಸ್ ಗೆದ್ದು, ಬ್ಯಾಟಿಂಗ್ ಆಯ್ದುಕೊಂಡ ಅಫ್ಘಾನಿಸ್ತಾನ ನಿಗದಿತ ೫೦ ಓವರ್‌ಗಳಲ್ಲಿ ೨೭೩ ರನ್ ಗಳಿಸಿತು. ಇದಕ್ಕುತ್ತರವಾಗಿ ೨೭೪ ರನ್‌ಗಳ ಗುರಿ ಬೆನ್ನತ್ತಿದ್ದ ಆಸ್ಟ್ರೇಲಿಯಾ, ೧೨.೫ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೦೯ ರನ್‌ಗಳಿಸಿದ್ದ ವೇಳೆ ಮಳೆ ಬಂದ ಪರಿಣಾಮ ಪಂದ್ಯವನ್ನು ರದ್ದುಗೊಳಿಸಲಾಯಿತು. ಆ ಮೂಲಕ ಆಸ್ಟ್ರೇಲಿಯಾ, ಭಾರತ ಹಾಗೂ ನ್ಯೂಜಿಲೆಂಡ್ ನಂತರ ಸೆಮಿಫೈನಲ್ ಪ್ರವೇಶಿದ ಮೂರನೇ ತಂಡವಾಯಿತು. ಇಂದು ಕರಾಚಿಯಲ್ಲಿ ನಡೆಯಲಿರುವ ಬಿ ಗುಂಪಿನ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಈ ಪಂದ್ಯದಲ್ಲಿ ಗೆಲುವು ಅಥವಾ ಕನಿಷ್ಠ ಸಮಬಲ ಸಾಧಿಸಿದರೂ ಸೆಮಿಫೈನಲ್ ಪ್ರವೇಶಿಸಲು ದಕ್ಷಿಣಆಫ್ರಿಕಾಗೆ ಅವಕಾಶವಿದೆ. ಆದಾಗ್ಯೂ, ಇಂಗ್ಲೆಂಡ್ ತಂಡ ದಕ್ಷಿಣ ಆಫ್ರಿಕಾ ತಂಡವನ್ನು ೨೦೭ ಅಥವಾ ಅದಕ್ಕಿಂತ ಹೆಚ್ಚಿನ ರನ್‌ಗಳ ಅಂತರದಲ್ಲಿ ಸೋಲಿಸಲು ಯಶಸ್ವಿಯಾದರೆ ಅಫ್ಘಾನಿಸ್ತಾನ ಸೆಮಿಫೈನಲ್‌ಗೆ ಅರ್ಹತೆ ಪಡೆಯಲಿದೆ.

*******

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್ ತಂಡ ೯ ವಿಕೆಟ್ ಗಳ ಜಯ ಸಾಧಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೨೩ರನ್ ಗಳಿಸಿತು. ಇದಕುತ್ತರವಾಗಿ ಡೆಲ್ಲಿ ತಂಡ ೧೪.೩ ಓವರ್‌ಗಳಲ್ಲಿ ಒಂದು ವಿಕೆಟ್ ನಷ್ಟಕ್ಕೆ ೧೨೪ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿದೆ.

******